3. ಅನೈತಿಕ ವ್ಯವಹಾರಗಳ (ತಡೆಗಟ್ಟುವುದು) ಅಧಿನಿಯಮ 1956 ಮತ್ತು ಸಾಮಾಜಿಕ ಹಾಗೂ ನೈತಿಕ ಆರೋಗ್ಯ ಕಾರ್ಯಕ್ರಮಗಳು:

ಅ. ಸ್ವೀಕಾರ ಕೇಂದ್ರಗಳು

ಆ. ರಾಜ್ಯ ಮಹಿಳಾ ನಿಲಯಗಳು

ಇ. ಅನುಪಾಲಾನಾ ಸೇವೆಗಳು

ಈ. ಬುದ್ಧಿ ಮಾಂದ್ಯ ಮಕ್ಕಳ ಅನುಪಾಲಾನ ಗೃಹ

6. ಇತರೆ ಕಾರ್ಯಕ್ರಮಗಳು:

ಅ) ಮಕ್ಕಳ ಸಹಾಯವಾಣಿ ಸೇವೆ

ಆ) ದತ್ತು ಸ್ವೀಕಾರ

ಇ) ಸ್ವದೇಶಿ ದತ್ತು ಕಾರ್ಯಕ್ರಮ ಪ್ರೋತ್ಸಾಹಿಸಲು ಸಂಸ್ಥೆಗಳಿಗೆ ಆರ್ಥಿಕ ಸಹಾಯ ಯೋಜನೆ (ಶಿಶು ಗೃಹ):

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳು

1. ಉದ್ಯೋಗಿನಿ
2. ಆಸರೆ
3. ಮಹಿಳಾ ತರಬೇತಿ ಯೋಜನೆ
4. ರಾಜ್ಯ ಸಂಪನ್ಮೂಲ ಕೇಂದ್ರ (ಮಹಿಳಾ ಸ್ವಯಂ ಉದ್ಯೋಗ ಕೇಂದ್ರ ನಿರ್ವಹಣೆ)
5. ಮಾರುಕಟ್ಟೆ ನೆರವು ಯೋಜನೆ
6. ದೇವದಾಸಿ ಪುನರ್ವಸತಿ ಯೋಜನೆ ಹಾಗೂ ಮಾಶಾಸನ ಯೋಜನೆ

304 ಶ್ರೀ ಶ್ರೀನಿವಾಸ ಎಂ. (ಮಂಡ್ಯ)
ಕೃಷಿ ಸಚಿವರು

ಅ) ರಾಜ್ಯದ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ವರ್ಗಾವಾರು ವಿವರ ನೀಡುವುದು)

3325

1) ಗ್ರೂಪ್–ಎ – 65
2) ಗ್ರೂಪ್–ಬಿ – 1471
3) ಗ್ರೂಪ್–ಸಿ – 1497
4) ಗ್ರೂಪ್–ಡಿ – 292

ಒಟ್ಟು **3325**

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ. ಸಹಾಯಕ ಕೃಷಿ ನಿರ್ದೇಶಕರ ನೇರ ನೇಮಕಾತಿ ಮೂಲಕ 25 ಹುದ್ದೆಗಳನ್ನು ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆ ಪಟ್ಟಿ ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಸದರಿ ಅಭ್ಯರ್ಥಿಗಳಿಗೆ ನೇಮಕಾತಿ ನೀಡುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

946 ಕೃಷಿ ಅಧಿಕಾರಿಗಳು ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಬಡ್ತಿಯಿಂದ ತುಂಬಬೇಕಾಧ ಹುದ್ದೆಗಳಾಗಿರುತ್ತದೆ.

ಖಾಲಿ ಇರುವ ಹುದ್ದೆಗಳನ್ನು 467 ಸಹಾಯಕ ಕೃಷಿ ಅಧಿಕಾರಿಗಳ ಹುದ್ದೆಗಳು ನೇರ ನೇಮಕಾತಿಯಿಂದ ತುಂಬುವ ಹುದ್ದೆಗಳಾಗಿದ್ದು, ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಲೋಚಿಸಲಾಗಿದ್ದು, ಆದಷ್ಟು ಶೀಘ್ರದಲ್ಲಿ ಭರ್ತಿ ಮಾಡುವ ಕುರಿತು ಪರಿಶೀಲಿಸಲಾಗುತ್ತಿದೆ.

ಕೃಷಿ ಸಹಾಯಕರ ಒಟ್ಟು 1086 ಹುದ್ದೆಗಳು ಖಾಲಿ ಇದ್ದು, ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಕುರಿತು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಒಬ್ಬರೂ ಕೃಷಿ ಸಹಾಯಕರನ್ನು ನೇಮಿಸುವ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಕೃಷಿ ಸಹಾಯಕ ಹುದ್ದೆಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ. ಮುಂದುವರೆದು, ಇಲಾಖೆಯಲ್ಲಿ 185 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿದ್ದು, 105 ಹುದ್ದೆಗಳನ್ನು ನೇರ ನೇರನೇಮಕಾತಿ ಮೂಲಕ ತುಂಬಲು ಪರಿಶೀಲಿಸುತ್ತಿದ್ದು, ಉಳಿದ 80 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆ ಪಟ್ಟಿ ಬಂದಿದ್ದು, ಶೀಘ್ರದಲ್ಲೇ ಆದೇಶ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ. ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಪ್ರಯೋಗಶಾಲಾ ಸಹಾಯಕರ ಖಾಲಿ ಇರುವ ಹುದ್ದೆಗಳಿಗೆ ಬಾಹ್ಯ ಮೂಲಗಳಿಂದ ತುಂಬುವ ಕುರಿತು ಪ್ರಕ್ರಿಯೆ ಜಾರಿಯಲ್ಲಿದೆ.

ಇ) ಕೃಷಿ ಇಲಾಖೆಯಲ್ಲಿ ಕೃಷಿ ಸಹಾಯಕರ ಕೊರತೆಯಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ನಿಜವೇ?

ಹೌದು.

ಈ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಕೈಗೊಂಡಿರುವ ಕ್ರಮವೇನು?

ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಕುರಿತು ಪರಿಶೀಲಿಸಲಾಗುತ್ತಿದ್ದು, ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಒಬೊಬ್ಬ ಕೃಷಿ

ಲ-10ಕ್ಷ-44

ಸಹಾಯಕರನ್ನು ನೇಮಿಸುವ ಬಗ್ಗೆ 4537 ಕೃಷಿ ಸಹಾಯಕ ಹುದ್ದೆಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

286 ಶ್ರೀ ಹ್ಯಾರೀಸ್ ಎನ್.ಎ
ಪಿ.ಎಂ.ನರೇಂದ್ರಸ್ವಾಮಿ(ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಭಾಗ್ಯಲಕ್ಷ್ಮಿ ಯೋಜನೆಯ ಅನುಷ್ಠಾನದ ರೂಪುರೇಷೆಗಳೇನು;
ಮಾಹಿತಿಯನ್ನು ಅನುಬಂಧ–1 ರಲ್ಲಿ ನೀಡಿದೆ.

ಆ) ಯೋಜನೆಯ ಮೂಲಕ ಈವರೆಗೆ ಸೌಲಭ್ಯವನ್ನು ಪಡೆದ ಫಲಾನುಭವಿಗಳೆಷ್ಟು (ಜಿಲ್ಲಾವಾರು ವಿವರ ನೀಡುವುದು)
ಮಾಹಿತಿಯನ್ನು ಅನುಬಂಧ–2 ರಲ್ಲಿ ನೀಡಿದೆ.

ಇ) ಈ ಯೋಜನೆಗೆ ಪ್ರಸ್ತುತ ನಿಗದಿಪಡಿಸಿರುವ ಠೇವಣಿ ಮೊತ್ತ ಎಷ್ಟು; ಅದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ (ವಿವರ ನೀಡುವುದು)?

ಸರ್ಕಾರದ ಆದೇಶ ಸಂ. ಮಮಇ 152 ಮಮಅ 2008 ದಿನಾಂಕ 14/08/08 ರಂತೆ ಭಾಗ್ಯಲಕ್ಷ್ಮಿ ಯೋಜನೆಯನ್ನು ಭಾಗಶಃ ಮಾರ್ಪಡಿಸಲಾಗಿರುತ್ತದೆ. ಪರಿಷ್ಕರಿಸಲಾದ ಯೋಜನೆಯು ದಿನಾಂಕ: 01/08/08 ರಂದು ಹಾಗೂ ನಂತರ ಜನಿಸಿದ ಮಕ್ಕಳಿಗೆ ಅನ್ವಯಿಸುವಂತೆ ರೂ.10,000/–ಗಳ ಬದಲಾಗಿ ಯೋಜನೆಯಡಿ ನೋಂದಣಿಯಾದ ಕುಟುಂಬದ ಮೊದಲನೆಯ ಹೆಣ್ಣು ಮಗುವಿನ ಹೆಸರಿನಲ್ಲಿ ರೂ.19300/– ಹಾಗೂ ಎರಡನೆಯ ಹೆಣ್ಣು ಮಗುವಿನ ಹೆಸರಿನಲ್ಲಿ ರೂ.18,350/–ಗಳ ಮೊತ್ತವನ್ನು ಪಾಲುದಾರ ಹಣಕಾಸು ಸಂಸ್ಥೆಯಲ್ಲಿ ಠೇವಣಿಯಲ್ಲಿರಿಸಲು ಸರ್ಕಾರ ಆದೇಶ ಹೊರಡಿಸಲಾಗಿದೆ.

ಪ್ರಸ್ತುತ ಠೇವಣಿ ಮೊತ್ತವನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

<u>ಚುಕ್ಕೆ ಇಲ್ಲದ ಪ್ರಶ್ನೆ ಸಂಖ್ಯೆ: 286 ಕ್ಕೆ</u>
<u>ಅನುಬಂಧ–1</u>

ರಾಜ್ಯ ಸರ್ಕಾರಕ್ಕೆ ಹೆಣ್ಣು ಮಗುವಿನ ಬಗ್ಗೆ ಇರುವ ಕಾಳಜಿ ವ್ಯಕ್ತಪಡಿಸಲು ಹಾಗೂ ಹೆಣ್ಣು ಮಗುವಿನ ವಿರುದ್ಧ ಸಮಾಜದಲ್ಲಿರುವ ಧೋರಣೆಯನ್ನು ಬದಲಿಸಲು 2006–07ನೇ ಸಾಲಿನಿಂದ ಭಾಗ್ಯಲಕ್ಷ್ಮಿ ಎಂಬ ಕಲ್ಯಾಣ ಯೋಜನೆಯನ್ನು ರಾಜ್ಯ ಸರ್ಕಾರವು ಜಾರಿಗೆ ತಂದಿರುತ್ತದೆ.

ಲಿಂಗ ಪ್ರಮಾಣ ವ್ಯತ್ಯಾಸವನ್ನು ಕಡಿಮೆಗೊಳಿಸುವುದು, ಬಾಲ ಕಾರ್ಮಿಕತೆ, ಹೆಣ್ಣು ಭ್ರೂಣ ಹತ್ಯೆ, ಬಾಲ್ಯ ವಿವಾಹ ಮುಂತಾದ ಸಾಮಾಜಿಕ ಪಿಡುಗುಗಳನ್ನು